## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪ್ರಬುದ್ಧ ಯೋಜನೆಯಡಿ ಉನ್ನತ ವ್ಯಾಸಂಗಕ್ಕೆ ಆಯ್ಕೆ ಮಾಡಲು Global Ranking ನ್ನು ಹೆಚ್ಚಿಸುವ ಬಗ್ಗೆ.,

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಸಕಇ 161 ಪಕವಿ 2023 ದಿನಾಂಕ:07-10-2023.
2. ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಇವರ ತಿದ್ದುಪಡಿ ಆದೇಶ ಸಂಖ್ಯೆ:MWD 278 MDS 2022 ದಿನಾಂಕ:19-10-2022.
3. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 371 ಬಿಎಂಎಸ್ 2023 ದಿನಾಂಕ: 13-09-2023.

******

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ 2023-24ನೇ ಸಾಲಿನಲ್ಲಿ ಜುಲೈ ತಿಂಗಳ ಆಯವ್ಯಯ ಭಾಷಣದ ಘೋಷಣೆಯಂತೆ Qs/Us News Overall Global Ranking 250 ರೊಳಗಿನ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿಗೆ ಪ್ರವೇಶ ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಪ್ರಬುದ್ಧ ಯೋಜನೆಯಡಿಯಲ್ಲಿ 2023-24ನೇ ಸಾಲಿನಿಂದ ಅರ್ಜಿ ಸಲ್ಲಿಸಲು ಮಾನದಂಡವನ್ನು ಪರಿಷ್ಕರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2) ರ ತಿದ್ದುಪಡಿ ಆದೇಶದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡಲು ವಿದ್ಯಾರ್ಥಿವೇತನ ಆಯ್ಕೆಗೆ ಪರಿಗಣಿಸಲು QS World University ಪಟ್ಟಿಯಲ್ಲಿನ ಟಾಪ್ 500 ರ Ranking ವಿಶ್ವವಿದ್ಯಾಲಯವನ್ನು ಪರಿಗಣಿಸಲು ಮಾನದಂಡವನ್ನು ನಿಗದಿಪಡಿಸಿ ಆದೇಶಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ವಿದೇಶಿ ವಿಶ್ವವಿದ್ಯಾಲಯಕ್ಕೆ ಉನ್ನತ ವ್ಯಾಸಂಗ ಮಾಡಲು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುವ ಸಾಲ ಯೋಜನೆಯ ಮಾರ್ಗಸೂಚಿಯಲ್ಲಿ ಆಯ್ಕೆಗೆ

Qs/Us News Overall Global Ranking 500 ರೊಳಗಿನ ವಿಶ್ವವಿದ್ಯಾಲಯವನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯು ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗ ಮಾಡಲು ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಲು Qs/Us News Overall Global Ranking 500 ರ ನ್ನು ನಿಗದಪಡಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ವಿದೇಶದಲ್ಲಿ ಸ್ನಾತಕೋತ್ತರ ಉನ್ನತ ವ್ಯಾಸಂಗ ಮಾಡಲು Qs/Us News Overall Global Ranking 250 ರೊಳಗಿನ ವಿಶ್ವವಿದ್ಯಾಲಯ Rankingನ್ನು ಶೇ.25 ರಷ್ಟು ಹೆಚ್ಚಿಸಿ ಒಟ್ಟಾರೆ Qs/Us News Overall Global Ranking 325 ರೊಳಗಿನ ವಿಶ್ವವಿದ್ಯಾಲಯವನ್ನು ಆಯ್ಕೆಗೆ ಪರಿಗಣಿಸಲು ಮಾನದಂಡವನ್ನು ಪರಿಷ್ಕರಿಸಲು ನಿರ್ಧರಿಸಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 495 ಎಸ್‌ಎಲ್ ಪಿ 2023, ಬೆಂಗಳೂರು,**
**ದಿನಾಂಕ: 11.12.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ವಿದೇಶದಲ್ಲಿ ಸ್ನಾತಕೋತ್ತರ ಪದವಿಗೆ ಪ್ರಬುದ್ಧ ಯೋಜನೆಯಡಿಯಲ್ಲಿ ಸಹಾಯಧನ ಕೋರಲು Qs/Us News Overall Global Ranking ನ್ನು 325 ಕ್ಕೆ ಹೆಚ್ಚಿಸಿ ಆಯ್ಕೆ ಪರಿಗಣಿಸಲು ಮಾನದಂಡವನ್ನು ಪರಿಷ್ಕರಿಸಿ ಆದೇಶಿಸಿದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಸಕಇ 494 ಎಸ್‌ಎಲ್ ಪಿ 2022, ಬೆಂಗಳೂರು ದಿನಾಂಕ:17-11-2022 ರಲ್ಲಿನ ಷರತ್ತುಗಳಲ್ಲಿ ಕ್ರ.ಸಂ-01 ರಲ್ಲಿನ ಹೊರತುಪಡಿಸಿ ಉಳಿದ ಷರತ್ತುಗಳನ್ನು ಮುಂದುವರೆಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/12

(ಎಲ್ ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1) ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕೋಶ, ಬೆಂಗಳೂರು.

3) ಅಪರ ನಿರ್ದೇಶಕರು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ವಸಂತ ನಗರ, ಬೆಂಗಳೂರು.
4) ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲ್ಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**<u>ಪ್ರತಿಗಳು:</u>**

1) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.

**************